ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 24/10/20

# 30 ಕೋಟಿ ವಾರಿಯರ್‌ಗೆ ಮೊದಲು ಲಸಿಕೆ



**ಹೊಸದಿಲ್ಲಿ:** ದೇಶಾದ್ಯಂತ ಕೊರೊನಾ ಸೋಂಕಿನ ಪ್ರಮಾಣ ತಗ್ಗುತ್ತಿರುವ ನಡುವೆಯೇ ಲಸಿಕೆ ಪೂರೈಕೆಗೆ ಸಿದ್ಧತೆ ಜೋರಾಗಿದೆ. ಲಸಿಕೆ ಲಭ್ಯವಾದ ಕೂಡಲೇ 'ಕೋವಿಡ್-19 ಲಸಿಕಾ ಕಾರ್ಯಕ್ರಮ'ದ ಹೆಸರಿನ ವಿಶೇಷ ಯೋಜನೆ ಮೂಲಕ ಕೇಂದ್ರ ಸರಕಾರವೇ ಅದನ್ನು ವಿತರಿಸಲಿದೆ. ಈ ಸಂಬಂಧ ಪ್ರತ್ಯೇಕ ಯೋಜನೆ ರೂಪಿಸದಂತೆ ರಾಜ್ಯಗಳಿಗೆ ಸೂಚಿಸಲಾಗಿದೆ.

ಲಸಿಕೆಯ ಫಲಾನುಭವಿಗಳನ್ನು ನಾಲ್ಕು ವರ್ಗಗಳಾಗಿ ವಿಂಗಡಿಸಲಾಗಿದ್ದು, ಆರಂಭಿಕವಾಗಿ ವೈದ್ಯರು ಹಾಗೂ ಕೊರೊನಾ ವಾರಿಯರ್ಸ್ ಸೇರಿದಂತೆ 30 ಕೋಟಿ ಫಲಾನುಭವಿಗಳಿಗೆ ಮೊದಲ ಆದ್ಯತೆ ಮೇರೆಗೆ ವ್ಯಾಕ್ಸಿನ್ ದೊರೆಯಲಿದೆ. ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ನೆರವಿನೊಂದಿಗೆ ಇಂತಹ ಫಲಾನುಭವಿಗಳ ಪಟ್ಟಿಯನ್ನು ಕೇಂದ್ರ ಸಿದ್ಧಪಡಿಸುತ್ತಿದೆ.

ಈ ಮಧ್ಯೆ, ದೇಶಾದ್ಯಂತ ಕೊರೊನಾ ಸೋಂಕಿತರ ಸಂಖ್ಯೆ ಕಳೆದ 2 ತಿಂಗಳಲ್ಲಿ ಇದೇ ಮೊದಲ ಬಾರಿಗೆ 7 ಲಕ್ಷಕ್ಕಿಂತ ಕೆಳಗಿಳಿದಿದೆ. ಕಳೆದ 24 ಗಂಟೆಯಲ್ಲಿ 54,356 ಹೊಸ ಪ್ರಕರಣಗಳು ವರದಿಯಾಗಿವೆ. 73,979 ಸೋಂಕಿತರು ಗುಣಮುಖರಾಗಿದ್ದಾರೆ.